## ಕರ್ನಾಟಕ ವಿಧಾನ ಪರಿಷತ್ತು

1] ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 882+894

2] ಮಾನ್ಯ ಸದಸ್ಯರ ಹೆಸರು : ಶ್ರೀ ಪ್ರಾಣೇಶ್ ಎಂ.ಕೆ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) ಹಾಗೂ ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)

3] ಉತ್ತರಿಸುವ ದಿನಾಂಕ : 12.03.2020

4] ಉತ್ತರಿಸುವ ಸಚಿವರು : ಗೃಹ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | "ಔರಾದ್ಕರ್ ವರದಿ"ಯನ್ನು ಜಾರಿಗೆ ತರುವ ವಿಚಾರ ಸರ್ಕಾರದ ಮುಂದೆ ಇದೆಯೇ; ಈ ವರದಿಯನ್ನು ಯಾವಾಗ ಸಲ್ಲಿಸಲಾಯಿತು. ಈ ವರದಿಯನ್ನು ಸರ್ಕಾರ ಒಪ್ಪಿಕೊಂಡಿದೆಯೇ; | ಶ್ರೀ ರಾಘವೇಂದ್ರ ಔರಾದ್ಕರ್ ನೇತೃತ್ವದ ಸಮಿತಿಯು ದಿನಾಂಕ: 15.09.2016 ರಂದು ಸರ್ಕಾರಕ್ಕೆ ಸಲ್ಲಿಸಿದ ವರದಿಯನ್ನು ಪರಿಶೀಲಿಸಿ ಸರ್ಕಾರವು ಆದೇಶ ಸಂಖ್ಯೆ: ಒಇ 09 ಎಸ್‌ಆರ್‌ಪಿ 2019, ದಿನಾಂಕ 16.07.2019 ರಲ್ಲಿ 05 ವಿವಿಧ ವೃಂದದ ಪೊಲೀಸ್ ಅಧಿಕಾರಿಗಳ/ಸಿಬ್ಬಂದಿಗಳ ವೇತನವನ್ನು ಪರಿಷ್ಕರಿಸಿ ಆದೇಶಿಸಿದೆ ಹಾಗೂ ಸರ್ಕಾರದ ವಿವಿಧ ಆದೇಶಗಳಲ್ಲಿ ಸಮವಸ್ತ್ರ ಭತ್ಯೆ, ಸಾರಿಗೆ ಭತ್ಯೆ ಹಾಗೂ ಕಷ್ಟ ಪರಿಹಾರ ಭತ್ಯೆಗಳನ್ನು ಮಂಜೂರು ಮಾಡಿ ಆದೇಶಿಸಿದೆ.<br>ಇನ್ನುಳಿದ 04 ವಿವಿಧ ವೃಂದದ ಅಧಿಕಾರಿ/ನೌಕರರುಗಳ ವೇತನದ ವ್ಯತ್ಯಾಸದ ಕುರಿತಂತೆ ಸರ್ಕಾರದ ಹಂತದಲ್ಲಿ ಪರಿಶೀಲಿಸಲಾಗುತ್ತಿದೆ.<br>ಒಟ್ಟಾರೆಯಾಗಿ ಸದರಿ ಸಮಿತಿಯ ಶಿಫಾರಸ್ಸುಗಳ ಅನುಷ್ಠಾನದಿಂದ ಪೊಲೀಸ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಒಟ್ಟು 84,773 ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಅನುಕೂಲವಾಗಿರುತ್ತದೆ. |
| ಆ) | ಇದ್ದಲ್ಲಿ, ಯಾವ ಕಾಲಮಿತಿಯಲ್ಲಿ ಔರಾದ್ಕರ್ ವರದಿಯನ್ನು ಜಾರಿಗೆ ತರಲಾಗುವುದು, (ಸ್ಪಷ್ಟ ಮಾಹಿತಿ ನೀಡುವುದು); ಈ ವರದಿಯ ಶಿಫಾರಸ್ಸಿನ ಪ್ರಮುಖ ಅಂಶಗಳೇನು (ವಿವರಗಳನ್ನು ನೀಡುವುದು) | |
| ಇ) | ಕೆಳಹಂತದ ಪೊಲೀಸ್ ಸಿಬ್ಬಂದಿಯ ವೇತನ ಹೆಚ್ಚಳದ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು (ಸಂಪೂರ್ಣ ಮಾಹಿತಿ ನೀಡುವುದು) | |
| ಈ) | ಕೇಂದ್ರದ ಮಾದರಿಯಲ್ಲಿ ಪೊಲೀಸ್ ಸಿಬ್ಬಂದಿಯ ಸೇವಾವಧಿಯನ್ನು 08 ಗಂಟೆಗೆ ಅನುವು ಮಾಡಿಕೊಡುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು.(ಸಂಪೂರ್ಣ ಮಾಹಿತಿ ನೀಡುವುದು) | ಈ ಬಗ್ಗೆ ಪರಿಶೀಲಿಸಲಾಗುವುದು. |

| | | |
|---|---|---|
| ಉ) | ಪೊಲೀಸ್ ಕೆಳಹಂತದ ಸಿಬ್ಬಂದಿ ನೇಮಕಾತಿಯನ್ನು ಏಕಮುಖ ನೇಮಕಾತಿ ಮಾಡುವ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು (ಸಂಪೂರ್ಣ ಮಾಹಿತಿ ನೀಡುವುದು) | ಆಡಳಿತಾತ್ಮಕ ದೃಷ್ಟಿಯಿಂದ ಏಕಗವಾಕ್ಷಿ ಮಾದರಿಯು ಸೂಕ್ತವಾಗಿರುವುದಿಲ್ಲ. ಅದರ ಬದಲಾಗಿ ಸಿವಿಲ್ ಪೊಲೀಸ್ ಕಾನ್ಸ್‌ಟೇಬಲ್ ಹುದ್ದೆಗಳ ನೇಮಕಾತಿ ಮಾಡುವಾಗ ಶೇಕಡ 10ರಷ್ಟು ಹುದ್ದೆಗಳನ್ನು ಇಲಾಖೆಯ ಇತರೆ ಅರ್ಹ ಪೊಲೀಸ್ ಕಾನ್ಸ್‌ಟೇಬಲ್‌ಗಳಿಗೆ ಮೀಸಲಿರಿಸಬಹುದೆಂದು ಹಾಗೂ ಚಾಲ್ತಿಯಲ್ಲಿರುವ ನಿಯಮಗಳನುಸಾರ ಪೊಲೀಸ್ ಸಬ್–ಇನ್ಸ್‌ಪೆಕ್ಟರ್ (ಸಿವಿಲ್) ಹುದ್ದೆಗಳ ನೇಮಕಾತಿಯಲ್ಲಿ ಸೇವಾನಿರತ ಮೀಸಲಾತಿಯಡಿಯಲ್ಲಿ ಪಿಸಿ ಇಂದ ಎಎಸ್‌ಐ ದರ್ಜೆಯ ಸಿಬ್ಬಂದಿಗಳಿಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿರುತ್ತದೆ. ಅದರ ಜೊತೆಗೆ ಎಫ್‌ಪಿಬಿ / ಸಿಎಆರ್/ಡಿಎಆರ್ / ಕೆಎಸ್‌ಆರ್‌ಪಿ / ವೈರ್‌ಲೆಸ್ ಮತ್ತು ಕೆಎಸ್‌ಐಎಸ್‌ಎಫ್ ಘಟಕಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಬ್–ಇನ್ಸ್‌ಪೆಕ್ಟರ್ ಅಭ್ಯರ್ಥಿಗಳು ಸಹ ಪಿಎಸ್‌ಐ (ಸಿವಿಲ್) ಹುದ್ದೆಗೆ ಸೇವಾನಿರತ ಮೀಸಲಾತಿಯಡಿ ಅರ್ಜಿ ಸಲ್ಲಿಸಲು ವೃಂದ ಮತ್ತು ನೇಮಕಾತಿ ನಿಯಮಗಳಿಗೆ ತಿದ್ದುಪಡಿ ತರುವ ಪ್ರಸ್ತಾವನೆ ಪರಿಶೀಲನೆಯಲ್ಲಿರುತ್ತದೆ. |
| ಊ) | ಸದರಿ ವರದಿಯ ಸಂಬಂಧ ಸರ್ಕಾರ ಜಾರಿಗೊಳಿಸಿರುವ ಸೌಲಭ್ಯಗಳೇನು;(ವಿವರಗಳನ್ನು ನೀಡುವುದು) ಹಾಗೂ ಯಾವ ಕಾಲಮಿತಿಯಲ್ಲಿ ಜಾರಿಗೊಳಿಸಲಾಗುವುದು? | ಸಮಿತಿಯ ಶಿಫಾರಸ್ಸಿನನ್ವಯ ಪರಿಶೀಲಿಸಿ, ಪೊಲೀಸ್ ಇಲಾಖೆಯ ವಿವಿಧ ವೃಂದದ ಅಧಿಕಾರಿ ಮತ್ತು ಸಿಬ್ಬಂದಿಯವರುಗಳ ವೇತನ ಶ್ರೇಣಿ ಹಾಗೂ ಇತರೆ ಭತ್ಯೆಗಳ ಪರಿಷ್ಕರಣೆ ಮಾಡಲಾಗಿರುತ್ತದೆ. |

**ಹೆಚ್‌ಡಿ 18 ಇಎಫ್‌ಎಸ್ 2020**

[ಬಸವರಾಜ ಬೊಮ್ಮಾಯಿ]
ಗೃಹ ಸಚಿವರು